# ನೂತನ ಸಂಸತ್ ಭವನ ನಿರ್ಮಾಣ ಕಾರ್ಯ ಆರಂಭ

ಪ್ರ.ವಾ. 16-1-2021

ನವದೆಹಲಿ (ಪಿಟಿಐ): ಸಂಸತ್ ಭವನದ ನೂತನ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಶುಕ್ರವಾರ ಚಾಲನೆ ನೀಡಲಾಯಿತು.

ನೂತನ ಕಟ್ಟಡ ನಿರ್ಮಾಣಕ್ಕೆ ಕಳೆದ ತಿಂಗಳ 10ರಂದು ಪ್ರಧಾನಿ ನರೇಂದ್ರ ಮೋದಿ ಭೂಮಿಪೂಜೆ ನೆರವೇರಿಸಿದ್ದರು. 2022ರಲ್ಲಿ ನಿರ್ಮಾಣ ಕಾರ್ಯ ಪೂರ್ಣಗೊಳ್ಳುವ ನಿರೀಕ್ಷೆ ಇದೆ. 75ನೇ ಸ್ವಾತಂತ್ರ್ಯೋತ್ಸವ ಅದೇ ವರ್ಷ ನಡೆಯಲಿದೆ.

ಆ ವರ್ಷದ ಚಳಿಗಾಲದ ಅಧಿವೇಶನವನ್ನು ನೂತನ ಸಂಸತ್‌ಭವನದಲ್ಲಿ ನಡೆಸಲು ಉದ್ದೇಶಿಸಲಾಗಿದೆ.



₹ 971 ಕೋಟಿ ವೆಚ್ಚದ ಈ ನಿರ್ಮಾಣ ಕಾರ್ಯದ ಗುತ್ತಿಗೆಯನ್ನು ಟಾಟಾ ಪ್ರಾಜೆಕ್ಟ್ಸ್ ಲಿಮಿಟೆಡ್‌ಗೆ ನೀಡಲಾಗಿದೆ.

'ನಿರ್ಮಾಣ ಕಾರ್ಯವು 35 ದಿನ ತಡವಾಗಿ ಆರಂಭವಾಗಿದ್ದರೂ ನಿಗದಿತ ಅವಧಿಗೂ ಮೊದಲೇ ನೂತನ ಸಂಸತ್ ಭವನವನ್ನು ನಿರ್ಮಿಸಲಾಗುವುದು' ಎಂದು ಸಂಸ್ಥೆ ಹೇಳಿದೆ.